2000ದ ಇಸವಿಯಲ್ಲಿ S.A.S. ಪದ್ಧತಿಯಲ್ಲಿ ಏನು ತೆರಿಗೆಯನ್ನು ಕಟ್ಟುತ್ತಿದ್ದರು, ಅದೇ ತೆರಿಗೆ ಪದ್ಧತಿಯನ್ನೇ ತರಬೇಕು ಎನ್ನುವ ಸದುದ್ದೇಶವನ್ನಿಟ್ಟುಕೊಂಡು ನಾವು ಮಾಡುತ್ತಿದ್ದೇವೆ. ಆದ್ದರಿಂದ ದಯವಿಟ್ಟು ಇದಕ್ಕೆ ಅವಕಾಶ ಮಾಡಿಕೊಡಬೇಕೆಂದು ಕೇಳಿಕೊಳ್ಳುತ್ತೇನೆ.

ಅಧ್ಯಕ್ಷರು :- ಈಗ ಪರ್ಯಾಲೋಚನಾ ಪ್ರಸ್ತಾವ.

(ಗೊಂದಲ)

(ಈ ಹಂತದಲ್ಲಿ ಜೆ.ಡಿ.(ಎಸ್) ಮತ್ತು ಕಾಂಗ್ರೆಸ್ ಪಕ್ಷದ ಶಾಸಕರು ಧರಣಿ ನಡೆಸಲು ಸದನದ ಬಾವಿಗೆ ಬಂದರು)

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ;

"2009ರ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು</u>

<u>ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು</u>

<u>ಖಂಡ 2 ರಿಂದ 4ರವರೆಗೆ</u>

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ "ಖಂಡ 2 ರಿಂದ 4 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

<u>ಪ್ರಸ್ತಾವ ಅಂಗೀಕರಿಸಲ್ಪಟ್ಟಿತು</u>

(ಖಂಡ 2 ರಿಂದ 4ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

<u>ಖಂಡ 1 ಇತ್ಯಾದಿ</u>

ಅಧ್ಯಕ್ಷರು :- ಪ್ರಸ್ತಾವ ಏನೆಂದರೆ;

ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಆರ್. ಅಶೋಕ್ (ಸಾರಿಗೆ ಸಚಿವರು):- ಮಾನ್ಯ ಅಧ್ಯಕ್ಷರೆ, 2009ರ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ.

"2009ರ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಅಧ್ಯಕ್ಷರು :- ದಯವಿಟ್ಟು ಎಲ್ಲರೂ ತಮ್ಮ ತಮ್ಮ ಸ್ಥಾನಗಳಿಗೆ ಹೋಗಬೇಕು. ಈಗ ಮುಂದಿನ ವಿಷಯವನ್ನು ಚರ್ಚೆಗೆ ತೆಗೆದುಕೊಳ್ಳುತ್ತೇನೆ. ಇನ್ನೂ ಹಲವಾರು ಬಿಲ್‌ಗಳಿವೆ. ಅವುಗಳ ಬಗ್ಗೆ ಚರ್ಚೆಯಾಗಬೇಕು, ಅವುಗಳಿಗೆ ಸದನದ ಒಪ್ಪಿಗೆಯನ್ನು ತೆಗೆದುಕೊಳ್ಳಬೇಕು. ದಯವಿಟ್ಟು ತಮ್ಮ ಸ್ಥಾನಗಳಿಗೆ ಹೋಗಿ. ನಿಮ್ಮ ವಿಚಾರಗಳನ್ನು ನೀವು ಹೇಳಿದಿರಿ. ಮಂತ್ರಿಗಳು ಬಿಲ್‌ಅನ್ನು ಪಾಸ್ ಮಾಡಿಕೊಂಡಿದ್ದಾರೆ. ತಾವು ತಮ್ಮ ಅಭಿಪ್ರಾಯಗಳನ್ನು ಹೇಳಿದಿರಿ, ಸಲಹೆ, ಸೂಚನೆಗಳನ್ನು ಕೊಟ್ಟಿದ್ದೀರಿ. ಅದನ್ನು ಸರ್ಕಾರ ತೆಗೆದುಕೊಂಡಿದೆ. ಈಗ ಬಿಲ್ ಪಾಸ್ ಆಗಿದೆ. ಈಗ ದಯವಿಟ್ಟು ಮುಂದಿನ ಬಿಲ್‌ಗಳನ್ನು ಪಾಸ್ ಮಾಡಲು ಅವಕಾಶ ಮಾಡಿಕೊಡಬೇಕು.

(ಸದನದ ಬಾವಿಯಿಂದ ಧರಣಿ ನಿರತ ಸದಸ್ಯರು ಘೋಷಣೆಗಳನ್ನು ಕೂಗುತ್ತಿದ್ದರು)

ಅಧ್ಯಕ್ಷರು :- ಈಗ ಸದನವನ್ನು ಮಧ್ಯಾಹ್ನ 2.30 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 1ಗಂಟೆ 28 ನಿಮಿಷಗಳಿಗೆ ಮುಂದೂಡಲ್ಪಟ್ಟು ಪುನ: ಮಧ್ಯಾಹ್ನ 2.30ಕ್ಕೆ ಸೇರಲು ನಿಶ್ಚಯಿಸಿತು)